ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 05-03-2021 ಪ್ರಶ್ನೆ ಸಂಖ್ಯೆ : 618 (736)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 05-03-2021

ಉತ್ತರಿಸುವ ಸಚಿವರು: ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

ವಿಷಯ : ಪಂಚಾಯತ್ ರಾಜ್ ಸಂಸ್ಥೆಗಳ ಅಧೀನದ ವಾಣಿಜ್ಯ ಕಟ್ಟಡಗಳ ಏಲಂ ಕುರಿತು

(ಅ) ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಜಿಲ್ಲಾ ಪಂಚಾಯತಿ, ತಾಲ್ಲೂಕು ಪಂಚಾಯತಿ ಮತ್ತು ಗ್ರಾಮ ಪಂಚಾಯತಿ ಅಧೀನದಲ್ಲಿರುವ ವಾಣಿಜ್ಯ ಕಟ್ಟಡಗಳ ಸಂಖ್ಯೆ ಎಷ್ಟು ; ಅವುಗಳಿಂದ ವಾರ್ಷಿಕವಾಗಿ ಸಂಗ್ರಹವಾಗುವ ಬಾಡಿಗೆಯ ಶುಲ್ಕವೆಷ್ಟು ; (ಜಿಲ್ಲಾವಾರು ಮತ್ತು ತಾಲ್ಲೂಕು ಪಂಚಾಯಿತಿವಾರು ಮಾಹಿತಿಯನ್ನು ನೀಡುವುದು)

(ಆ) ಈ ವಾಣಿಜ್ಯ ಕಟ್ಟಡಗಳ ಏಲಂ ಪ್ರಕ್ರಿಯೆಗೆ ಸರ್ಕಾರದಿಂದ ನಿಯಮಾವಳಿಯನ್ನು ರೂಪಿಸಲಾಗಿದೆಯೇ ; ಇಲ್ಲವಾದಲ್ಲಿ, ಈ ಸ್ಥಳೀಯ ಸಂಸ್ಥೆಗಳಲ್ಲಿ ಯಾವ ನಿಯಮಗಳನ್ನು ಅನುಸರಿಸಿ ಏಲಂ ನಡೆಸಲಾಗುತ್ತಿದೆ ;

(ಇ) ಬಾಡಿಗೆ ಪಡೆದ ವರ್ತಕರು ನ್ಯಾಯಾಲಯದಲ್ಲಿ ದಾವೆಗಳನ್ನು ದಾಖಲಿಸುವ ಪ್ರಕರಣಗಳಲ್ಲಿ ಇದರಿಂದ ಸ್ಥಳೀಯ ಸಂಸ್ಥೆಗಳಿಗೆ ಹಿನ್ನಡೆಯಾಗುತ್ತಿರುವುದು ನಿಜವೇ ; ಇದರಿಂದ ಸ್ಥಳೀಯ ಸಂಸ್ಥೆಗಳು ಆದಾಯದಲ್ಲಿ ನಷ್ಟ ಅನುಭವಿಸುತ್ತಿದ್ದನ್ನು ತಪ್ಪಿಸಲು ಸರ್ಕಾರದ ಕ್ರಮವೇನು ?